ಗೌರಿಬಿದನೂರು ತಾಲ್ಲೂಕಿನಲ್ಲಿ ಆಶ್ರಯ ಯೋಜನೆ

1941- ಶ್ರೀ ಜ್ಯೋತಿರೆಡ್ಡಿ (ಗೌರಿಬಿದನೂರು) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಗೌರಿಬಿದನೂರು ತಾಲ್ಲೂಕು ಕರೇಕಲ್ಲಹಳ್ಳಿ ಗ್ರಾಮದ ಸರ್ವೆ ನಂ. 129 ರಲ್ಲಿರುವ ಜಮೀನು ಸರ್ಕಾರದ್ದೆ?*

ಆ) *ಹಾಗಿದ್ದಲ್ಲಿ ಜಮೀನಿನಲ್ಲಿ ಬಡವರಿಗಾಗಿ ಆಶ್ರಯ ಯೋಜನೆಯಡಿ ಬಡವರಿಗಾಗಿ ಉಚಿತ ನಿವೇಶನ ಹಂಚಲು ಸರ್ಕಾರ ಕ್ರಮ ಕೈಗೊಳ್ಳುವುದೇ?*

ಇ) *ಖಾಸಗಿಯವರು ಪ್ರಶ್ನಿತ ಪ್ರದೇಶದಲ್ಲಿ ನಿವೇಶನಗಳನ್ನಾಗಿ ವಿಂಗಡಿಸಿ ನೋಂದಣಿ ಇಲ್ಲದೆ, ಸಾರ್ವಜನಿಕರಿಗೆ ಮಾರುತ್ತಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ?*

ಈ) *ಹಾಗಿದ್ದಲ್ಲಿ ಇಂತಹ ಖಾಸಗಿ ವ್ಯಕ್ತಿಗಳ ವಿರುದ್ಧ ತೆಗೆದುಕೊಂಡ ಕ್ರಮವೇನು?*

ಶ್ರೀ ಬಿ. ಸೋಮಶೇಖರ್ (ಕಂದಾಯ ಸಚಿವರು) :

ಅ) ಹೌದು, ಸರ್ಕಾರಿ ಕೆರೆ ಎಂದು ವರ್ಗೀಕರಿಸಿರುತ್ತೆ.

ಆ) ಇಲ್ಲ.

ಇ) ಹೌದು.

ಈ) ಈ ಬಗ್ಗೆ ಉಚ್ಚ ನ್ಯಾಯಾಲಯದ ಆದೇಶದನ್ವಯ ಜಿಲ್ಲಾಧಿಕಾರಿಗಳ ನ್ಯಾಯಾಲಯದಲ್ಲಿ ಮರು ವಿಚಾರಣೆ ಪ್ರಕರಣ ಕೈಗೆತ್ತಿಕೊಳ್ಳಲಾಗಿದೆ.

ತುಮಕೂರಿನಲ್ಲಿ ಗ್ರಾಮ ಲೆಕ್ಕಿಗರಿಗೆ ವಸತಿ ಸೌಲಭ್ಯ

1942 - ಶ್ರೀ ಟಿ.ಬಿ. ಜಯಚಂದ್ರ (ಕಳ್ಳಂಬೆಳ್ಳ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ತುಮಕೂರಿನಲ್ಲಿ ಗ್ರಾಮ ಲೆಕ್ಕಿಗರು ಸ್ಥಳದಲ್ಲಿ ವಾಸವಿಲ್ಲದೇ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಗ್ರಾಮ ಲೆಕ್ಕಿಗರು ಖಾಯಂ ಆಗಿ ಕೆಲಸ ಮಾಡುವ ಸ್ಥಳದಲ್ಲಿಯೇ ವಾಸಿಸಲು ಸರ್ಕಾರದ ಕಟ್ಟುನಿಟ್ಟಿನ ಕಾರ್ಯಕ್ರಮವೇನು?*

ಶ್ರೀ ಬಿ. ಸೋಮಶೇಖರ್ (ಕಂದಾಯ ಸಚಿವರು) :

ಅ) ಹೌದು.

ಆ) ಗ್ರಾಮ ಲೆಕ್ಕಿಗರು ತಮ್ಮ ಕೇಂದ್ರ ಸ್ಥಾನದಲ್ಲಿರುವ ಬಗ್ಗೆ ಸರ್ಕಾರವು ಈಗಾಗಲೇ ಅನೇಕ

ಸುತ್ತೋಲೆಗಳನ್ನು ಹೊರಡಿಸಿದ್ದು ಸುತ್ತೋಲೆಯ ನಿಯಮವನ್ನು ಪಾಲಿಸದ ಗ್ರಾಮ ಲೆಕ್ಕಿಗರುಗಳ ಮೇಲೆ ಶಿಸ್ತು ಕ್ರಮ ಜರುಗಿಸುವಂತೆ ದಿನಾಂಕ 25-06-1997 ರ ಸುತ್ತೋಲೆ ಸಂಖ್ಯೆ: ಆರ್‌ಡಿ 173 ಬಿಎಸ್‌ಸಿ 93ರಲ್ಲಿ ಸೂಚಿಸಲಾಗಿದೆ. ಇದಲ್ಲದೇ ದಿನಾಂಕ 19-11-97ರ ಸುತ್ತೋಲೆ ಸಂಖ್ಯೆ : ಆರ್‌ಡಿ 203 ಬಿಎಸ್‌ಸಿ 97 ರಲ್ಲಿ ಗ್ರಾಮ ಲೆಕ್ಕಿಗರು ಅವರು ಕೇಂದ್ರ ಸ್ಥಾನದಲ್ಲಿ ಕಡ್ಡಾಯವಾಗಿ ವಾಸ್ತವ್ಯ ಇರುವ ಬಗ್ಗೆ ಸೂಚನೆ ನೀಡಲಾಗಿದೆ.

ಕಳ್ಳಂಬೆಳ್ಳ ಕ್ಷೇತ್ರದ ದಸೂಡಿಗೆ ವಿದ್ಯಾರ್ಥಿನಿಲಯ ಮಂಜೂರು

1943 - ಶ್ರೀ ಟಿ.ಬಿ. ಜಯಚಂದ್ರ (ಕಳ್ಳಂಬೆಳ್ಳ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಕಳ್ಳಂಬೆಳ್ಳ ಕ್ಷೇತ್ರದ ಹಿಂದುಳಿದ ಪ್ರದೇಶವಾದ ದಸೂಡಿಗೆ ಪರಿಶಿಷ್ಟ ಜಾತಿ:ಪರಿಶಿಷ್ಟ ಪಂಗಡ ವಿದ್ಯಾರ್ಥಿ ನಿಲಯವನ್ನು ಮಂಜೂರು ಮಾಡಲು ಹಲವು ವರ್ಷದಿಂದ ಮನವಿ ಸಲ್ಲಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಈ ಸಾಲಿನಲ್ಲಾದರೂ ದಸೂಡಿಗೆ ವಿದ್ಯಾರ್ಥಿನಿಲಯವನ್ನು ಮಂಜೂರು ಮಾಡಲು ಸರ್ಕಾರವು ಕ್ರಮ ಕೈಗೊಳ್ಳುವುದೇ?*

ಶ್ರೀ ಕೆ.ಎಂ. ಕೃಷ್ಣಾರೆಡ್ಡಿ (ಸಮಾಜ ಕಲ್ಯಾಣ ಸಚಿವರು) :

ಅ) ಹೌದು

ಆ) ಆಯವ್ಯಯ ಲಭ್ಯತೆ ಹಾಗೂ ಅವಶ್ಯಕತೆಯನ್ನು ಅನುಸರಿಸಿ ವಿದ್ಯಾರ್ಥನಿಲಯವನ್ನು ಮಂಜೂರು ಮಾಡಲು ಕ್ರಮ ತೆಗೆದುಕೊಳ್ಳಲಾಗುವುದು.

ಹಿರಿಯೂರು ವಾಣಿವಿಲಾಸ ಸಕ್ಕರೆ ಕಾರ್ಖಾನೆ ಆಡಳಿತ ಮಂಡಳಿ

1944 - ಶ್ರೀ ಟಿ.ಬಿ. ಜಯಚಂದ್ರ (ಕಳ್ಳಂಬೆಳ್ಳ) : ಮಾನ್ಯ ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಹಿರಿಯೂರು ವಾಣಿವಿಲಾಸ ಸಕ್ಕರೆ ಕಾರ್ಖಾನೆ ಪ್ರಾರಂಭವಾಗಿ ಕೆಲವು ವರ್ಷಗಳಾಗಿದ್ದರು ಆಡಳಿತ ಮಂಡಳಿ ಇಲ್ಲದೆ ಆಡಳಿತಾಧಿಕಾರಿಯ ಮುಖಾಂತರ ಆಡಳಿತವನ್ನು ನಡೆಸಿಕೊಂಡು ಬರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಈ ಕಾರ್ಖಾನೆಯು ಸುಗಮವಾಗಿ ಆಡಳಿತ ನಡೆಸಿಕೊಂಡು ಹೋಗಲು ಆಡಳಿತ ಮಂಡಳಿಯನ್ನು ರಚಿಸದಿರಲು ಕಾರಣವೇನು?*

ಇ) *ಈ ಬಗ್ಗೆ ಸರ್ಕಾರ ಕ್ರಮ ಕೈಗೊಳ್ಳುವುದೇ?*